# ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:** **"ಗೃಹ ಜ್ಯೋತಿ"** ಯೋಜನೆಯಡಿ ಪ್ರತಿ ಮನೆಗೆ ಉಚಿತ ವಿದ್ಯುತ್ ಸೌಕರ್ಯ ಒದಗಿಸುವ ಸಂಬಂಧ ವಿದ್ಯುತ್ ಸರಬರಾಜು ಕಂಪನಿಗಳು ಕೋರಿರುವ ಅಂಶಗಳಿಗೆ ಸ್ಪಷ್ಟೀಕರಣ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/154/ಪಿಎಸ್‌ಆರ್/2023, ದಿನಾಂಕ: 20.05.2023.
2. ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/164/ಪಿಎಸ್‌ಆರ್/2023, ದಿನಾಂಕ: 05.06.2023.

**ಪ್ರಸ್ತಾವನೆ:**

ಮೂಲಭೂತ ಸೌಕರ್ಯಗಳಲ್ಲಿ ಒಂದಾದ ವಿದ್ಯುಚ್ಛಕ್ತಿಯನ್ನು ಉಚಿತವಾಗಿ ರಾಜ್ಯದ ನಾಗರೀಕರಿಗೆ ಒದಗಿಸಲು ದಿನಾಂಕ:20.05.2023 ರಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ ಗೃಹ ಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಒದಗಿಸಲು ತಾತ್ವಿಕ ಅನುಮೋದನೆ ನೀಡಿದೆ.

ಸಚಿವ ಸಂಪುಟವು ದಿನಾಂಕ:02.06.2023 ರಂದು ನಡೆದ ಸಭೆಯಲ್ಲಿ "ಗೃಹ ಜ್ಯೋತಿ" ಯೋಜನೆಯನ್ನು ಕೆಲವು ಷರತ್ತುಗಳೊಂದಿಗೆ ದಿನಾಂಕ: 01.07.2023 ರಿಂದ ಜಾರಿಗೆ ತರುವಂತೆ ಅನುಮೋದಿಸಿದೆ.

"ಗೃಹ ಜ್ಯೋತಿ" ಯೋಜನೆಯಡಿ ರಾಜ್ಯದಲ್ಲಿನ ಪ್ರತಿ ಮನೆಗೆ ಪ್ರತಿ ತಿಂಗಳಿಗೆ ಗರಿಷ್ಠ 200 ಯೂನಿಟ್‌ಗಳವರೆಗಿನ ಬಳಕೆಯ ಮಿತಿಯಲ್ಲಿ ಪ್ರತಿ ಗ್ರಾಹಕರ ಮಾಸಿಕ ಸರಾಸರಿ ಬಳಕೆಯ (ಆರ್ಥಿಕ ವರ್ಷ 2022-23ರ ಬಳಕೆಯ ಆಧಾರದನ್ವಯ) ಯೂನಿಟ್‌ಗಳ ಮೇಲೆ ಶೇ.10ರಷ್ಟು ಹೆಚ್ಚಿನ ಬಳಕೆಯ ಮಿತಿಯನ್ನು ಅನುಮತಿಸಿ, ಅದಕ್ಕನುಗುಣವಾಗಿ ವಿದ್ಯುತ್ ಬಿಲ್ಲಿನ ಮೊತ್ತವನ್ನು ಉಚಿತವಾಗಿ ಒದಗಿಸಲು; ಹಾಗೂ 200 ಯೂನಿಟ್‌ಗಳ ಬಳಕೆಯನ್ನು ಮೀರಿದ ಗ್ರಾಹಕರು ಪೂರ್ಣ ವಿದ್ಯುತ್ ಬಿಲ್ಲನ್ನು ಪಾವತಿಸಲು ಸರ್ಕಾರವು ಕೆಲವು ಷರತ್ತುಗಳೊಂದಿಗೆ ಸದರಿ ಯೋಜನೆಯನ್ನು ದಿನಾಂಕ: 01.07.2023 ರಿಂದ ಜಾರಿಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/164/ಪಿಎಸ್‌ಆರ್/2023, ದಿನಾಂಕ: 05.06.2023 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿದೆ.

ವಿದ್ಯುತ್ ಸರಬರಾಜು ಕಂಪನಿಗಳು "ಗೃಹ ಜ್ಯೋತಿ" ಯೋಜನೆಯಡಿ ಉಚಿತ ವಿದ್ಯುತ್ ಸೌಕರ್ಯ ಒದಗಿಸುವ ಸಂಬಂಧ ಉಂಟಾಗಿರುವ ಗೊಂದಲಗಳ ಬಗ್ಗೆ ಸ್ಪಷ್ಟೀಕರಣ ನೀಡಲು ಕೋರಿರುತ್ತಾರೆ. ಆದ್ದರಿಂದ ಈ ಕೆಳಕಂಡ ಆದೇಶ.



Scanned with OKEN Scanner

**ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/164/ಪಿಎಸ್ಆರ್/2023**

**ದಿನಾಂಕ: 15.06.2023, ಬೆಂಗಳೂರು**

"ಗೃಹ ಜ್ಯೋತಿ" ಯೋಜನೆಯಡಿ ಪ್ರತಿ ಮನೆಗೆ ಉಚಿತ ವಿದ್ಯುತ್ ಸೌಕರ್ಯ ಒದಗಿಸುವ ಸಂಬಂಧ ಉಂಟಾಗಿರುವ ಗೊಂದಲಗಳ ಅಂಶಗಳ ಕುರಿತು ಅನುಬಂಧದಲ್ಲಿರುವಂತೆ ಸ್ಪಷ್ಟೀಕರಣ ನೀಡಲಾಗಿದೆ.

ಗೃಹ ಜ್ಯೋತಿ ಯೋಜನೆಯಡಿ ಸೌಲಭ್ಯವನ್ನು ಪಡೆಯಲು ಆಧಾರ್ ಸಂಖ್ಯೆಯನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ಜೋಡಣೆ ಮಾಡಿ ನೊಂದಾಯಿಸುವುದು ಕಡ್ಡಾಯವಾಗಿರುತ್ತದೆ. ಅನುಬಂಧವು ಈ ಆದೇಶದ ಭಾಗವಾಗಿರುತ್ತದೆ.

ಈ ಆದೇಶವನ್ನು ಕಡತ ಸಂಖ್ಯೆ: ಎನರ್ಜಿ/164/ಪಿಎಸ್ಆರ್/2023 ರಲ್ಲಿನ ಟಿಪ್ಪಣಿ ಸಂಖ್ಯೆ: 24 ರಲ್ಲಿ ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಉಳಿದಂತೆ ಸರ್ಕಾರದ ದಿನಾಂಕ: 05.06.2023 ರ ಆದೇಶದಲ್ಲಿನ ಎಲ್ಲಾ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿನೋದ್ ಕುಮಾರ್ ಡಿ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

**ಪ್ರತಿಗಳು:**

1. ಮಹಾಲೇಖಪಾಲರು (ಎ&ಇ) / (ಲೆಕ್ಕಪರಿಶೋಧನೆ–1 & ಲೆಕ್ಕಪರಿಶೋಧನೆ–2) ಕರ್ನಾಟಕ, ಬೆಂಗಳೂರು–1.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ / ಕವಿನಿನಿ / ಬೆವಿಕಂ / ಮವಿಕಂ / ಹುವಿಕಂ / ಗುವಿಕಂ / ಚಾವಿಸನಿನಿ / ಹುಕ್ಕೇರಿ.



Scanned with OKEN Scanner

8. ಮಾನ್ಯ ಉಪಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
9. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ, #16, ಸಿ–1, ಮಿಲ್ಲರ್ಸ್ ಬಿಡ್ ಏರಿಯಾ, ವಸಂತನಗರ, ಬೆಂಗಳೂರು–52.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ–1), ವಿಧಾನ ಸೌಧ, ಬೆಂಗಳೂರು.
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
13. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
14. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
15. ಶಾಖೆಯ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.



Scanned with OKEN Scanner

## ಅನುಬಂಧ

### "ಗೃಹ ಜ್ಯೋತಿ" ಯೋಜನೆಯಡಿ ಉಚಿತ ವಿದ್ಯುತ್ ಸೌಕರ್ಯ ಒದಗಿಸುವ ಸಂಬಂಧ ಉಂಟಾಗಿರುವ ಗೊಂದಲಗಳಿಗೆ ಸ್ಪಷ್ಟೀಕರಣ ಕುರಿತು

| ಕ್ರ.ಸಂ | ಕೋರಿರುವ ಅಂಶಗಳು | ಸ್ಪಷ್ಟೀಕರಣ |
|---|---|---|
| 1 | ಈ ಯೋಜನೆಯು ಬಾಡಿಗೆ ಮನೆಗಳಲ್ಲಿ ವಾಸಿಸುತ್ತಿರುವ ವಿದ್ಯುತ್ ಬಳಕೆದಾರರಿಗೂ ಅನ್ವಯಿಸುವುದೆ? | ಗೃಹ ವಿದ್ಯುತ್ ಬಳಕೆದಾರರು ಬಾಡಿಗೆದಾರರಾಗಿದ್ದಲ್ಲಿ, ವಾಸದ ಮನೆಯ ವಿಳಾಸಕ್ಕೆ ಸಂಬಂಧಿಸಿದಂತೆ ಆಧಾರ್ ಸಂಖ್ಯೆಯನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ಜೋಡಣೆ ಮಾಡಿ ನೊಂದಾಯಿಸುವ ಮೂಲಕ ಸದರಿ ಸೌಲಭ್ಯವನ್ನು ಪಡೆಯುವುದು. |
| 2 | ಗೃಹ ಬಳಕೆದಾರರು / ಫಲಾನುಭವಿಗಳು ಯಾವುದಾದರು ಮಾಹೆಗಳಲ್ಲಿ ಮಾತ್ರ 200 ಯುನಿಟ್ ಮಿತಿ ದಾಟಿದರೂ, ಸದರಿ ಯೋಜನೆಯಲ್ಲಿ ಮುಂದುವರಿಯುವವರೆ? | 200 ಯುನಿಟ್ ಗಳ ಬಳಕೆಯ ಮಿತಿಯನ್ನು ಯಾವುದಾದರು ಮಾಹೆಗಳಲ್ಲಿ ಮೀರಿದಲ್ಲಿ, ಆ ತಿಂಗಳ ಪೂರ್ಣ ವಿದ್ಯುತ್ ಬಿಲ್ಲನ್ನು ಪಾವತಿಸಿ, ಸದರಿ ಯೋಜನೆಯಲ್ಲಿ ಮುಂದುವರಿಯುವುದು. |
| 3 | ಸರ್ಕಾರದ ಆದೇಶದ ನಂತರ ಹೊಸದಾಗಿ ಗೃಹಬಳಕೆಗಾಗಿ ವಿದ್ಯುತ್ ಸಂಪರ್ಕ ಪಡೆದ ಗ್ರಾಹಕರಿಗೆ / ಬಳಕೆದಾರರಿಗೆ ಈ ಯೋಜನೆಯು ಅನ್ವಯಿಸುತ್ತದೆಯೇ ? | ಹೊಸ ಸಂಪರ್ಕ ಪಡೆದ ಗ್ರಾಹಕರಿಗೆ ಬಳಕೆ ಇತಿಹಾಸ ಇಲ್ಲದಿರುವುದರಿಂದ ರಾಜ್ಯದ ಗೃಹ ಬಳಕೆದಾರರ ಸರಾಸರಿ ಬಳಕೆಯು ಮಾಸಿಕ 53 ಯೂನಿಟ್‌ಗಳಾಗಿರುವುದರಿಂದ 53 ಯೂನಿಟ್‌ಗಳನ್ನೇ ನಿರ್ಧರಿಸಿ ಈ ಯೋಜನೆಯ ಸೌಲಭ್ಯವನ್ನು ವಿಸ್ತರಿಸುವುದು. |
| 4 | 2022–23 ರಲ್ಲಿ ಒಂದು ವರ್ಷಕ್ಕಿಂತ ಕಡಿಮೆ ಅವಧಿಯ ಬಳಕೆ ದಾಖಲಾಗಿದ್ದಲ್ಲಿ, ಅಂತಹ ಮನೆಗಳ ಕಡಿಮೆ ಅವಧಿಯ ಸರಾಸರಿ ಪರಿಗಣಿಸುವ ವಿಧಾನ ಹೇಗೆ? (Shifted Houses) | ಬಳಕೆ ಇತಿಹಾಸ ಇಲ್ಲದಿರುವುದರಿಂದ ರಾಜ್ಯದ ಗೃಹಬಳಕೆದಾರರ ಸರಾಸರಿ ಬಳಕೆಯು ಮಾಸಿಕ 53 ಯೂನಿಟ್‌ಗಳಾಗಿರುವುದರಿಂದ 53 ಯೂನಿಟ್‌ಗಳನ್ನೇ ನಿರ್ಧರಿಸಿ ಈ ಯೋಜನೆಯ ಸೌಲಭ್ಯವನ್ನು ವಿಸ್ತರಿಸುವುದು. |
| 5 | Multi Stored Apartment ಗಳಿಗೆ ಈ ಯೋಜನೆ ಅನ್ವಯಿಸುತ್ತದೆಯೇ? | ಯಾವ ಮನೆಗಳಿಗೆ ಪ್ರತ್ಯೇಕ ಮೀಟರ್ ಇದೆಯೋ ಹಾಗೂ ಮೀಟರ್ ರೀಡಿಂಗ್ ಮಾಡಲಾಗುತ್ತಿದೆಯೋ ಅಂತಹ ಎಲ್ಲಾ ಮನೆಗಳಿಗೆ ಈ ಯೋಜನೆ ಅನ್ವಯಿಸುತ್ತದೆ. |

(ವಿನೋದ್ ಕುಮಾರ್ ಡಿ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ



Scanned with OKEN Scanner